**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಿ.ಎಂ.ಫಾರೂಖ್ ರವರು ನಿಯಮ 72ರ ಅಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ.**

**ಸೂಚನೆ:**

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಉಲ್ಲಾಳ ನಗರಸಭೆ ವ್ಯಾಪ್ತಿಯಲ್ಲಿರುವ ಸಮ್ಮರ್ ಸ್ಯಾಂಡ್ ರೆಸಾರ್ಟ್ ಪಕ್ಕದಲ್ಲಿರುವ ಸಮುದ್ರ ದಡವು (ಬೀಚ್) ಸುಂದರ ಪ್ರವಾಸಿ ತಾಣವಾಗಿದ್ದು, ಪ್ರತಿ ದಿನ ಇಲ್ಲಿ ನೂರಾರು ಜನ ಪ್ರವಾಸಿಗರು ಹಾಗೂ ಸ್ಥಳೀಯರು ಬೀಚ್ ಸೌಂದರ್ಯವನ್ನು ಸವಿಯಲು ಬರುತ್ತಿರುತ್ತಾರೆ. ಆದರೆ, ಈ ಪ್ರವಾಸಿ ತಾಣದ ಆವರಣದಲ್ಲಿಯೇ ನಗರ ಸಭೆಯವರು ಘನತ್ಯಾಜ್ಯವನ್ನು ತಂದು ಸುರಿಯುತ್ತಿರುವುದರಿಂದ ಉಂಟಾಗುವ ದುರ್ನಾತದಿಂದ ಪ್ರವಾಸಿಗರಿಗೆ ತೊಂದರೆಯಾಗುತ್ತಿದೆ.

ಆದುದರಿಂದ, ಸದರಿ ಪ್ರವಾಸಿ ತಾಣದ ಆವರಣದಲ್ಲಿ ನಗರ ಪಾಲಿಕೆಯಿಂದ ಘನ ತ್ಯಾಜ್ಯವನ್ನು ಸುರಿಯುವುದನ್ನು ತಡೆದು ಆವರಣವನ್ನು ಸ್ವಚ್ಛಗೊಳಿಸಿ ಸಂಜೆ ಸಮಯದಲ್ಲಿ ಬರುವ ಪ್ರವಾಸಿಗರಿಗೆ ಅನೂಕೂಲವಾಗುವಂತೆ ಸೋಡಿಯಂ ಲ್ಯಾಂಪ್ ಹಾಗೂ ಬೆಂಚ್ ಗಳನ್ನು ಅಳವಡಿಸಿ ಪ್ರವಾಸಿ ತಾಣವನ್ನು ಅಭಿವೃದ್ಧಿಗೊಳಿಸುವ ಕುರಿತು ಮಾನ್ಯ ಪ್ರವಾಸೋದ್ಯಮ ಹಾಗೂ ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯ ಬಯಸುತ್ತೇನೆ.

*****

**ಉತ್ತರ**

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಉಳ್ಳಾಲ ನಗರಸಭಾ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕವು ಇಲ್ಲದೇ ಇರುವುದರಿಂದ ನಗರಸಭಾ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯವನ್ನು ಉಳ್ಳಾಲ ನಗರಸಭಾ ವ್ಯಾಪ್ತಿಯ ಸಮ್ಮರ್ ಸ್ಯಾಂಡ್ ಬಳಿಯ ಸಮುದ್ರ ಕಿನಾರೆ ಬದಿಯ ಸುಮಾರು 100ಮೀ ದೂರದಲ್ಲಿರುವ ಖಾಲಿ ಸ್ಥಳದಲ್ಲಿ ಸಂಗ್ರಹಿಸಿದ ತ್ಯಾಜ್ಯವನ್ನು ಕಾಂಪೆಕ್ಟರ್ ವಾಹನಕ್ಕೆ ತುಂಬಿಸಿ ಮಂಗಳೂರು ಮಹಾನಗರ ಪಾಲಿಕೆಯ ಘನತ್ಯಾಜ್ಯ ಘಟಕ ಪಚ್ಚನಾಡಿಗೆ ಸಾಗಿಸಲಾಗುತ್ತಿದೆ.

ಸದರಿ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಉಳ್ಳಾಲ ತಾಲೂಕಿನ ನರಿಂಗಾನ ಎಂಬಲ್ಲಿನ ಸರ್ವೆ ನಂಬರ್ 49ರಲ್ಲಿ 60.74ಎಕರೆ ಸ್ಥಳದಲ್ಲಿ ಉಳ್ಳಾಲ ನಗರಸಭಾ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ವಿಲೇ ಮಾಡಲು ಸ್ಥಳ ಕಾಯ್ದಿರಿಸಿದ ಕೂಡಲೇ ನ್ಯೂನ್ಯತೆಗಳನ್ನು ಸರಿಪಡಿಸಲಾಗುವುದೆಂದು ಮತ್ತು ಸಂಜೆ ಸಮಯದಲ್ಲಿ ಬರುವ ಪ್ರವಾಸಿಗಳಿಗೆ ಅನುಕೂಲವಾಗುವಂತೆ ದೀಪಗಳನ್ನು ಹಾಗೂ ಬೆಂಚ್‌ಗಳನ್ನು ಅಳವಡಿಸಿ ಪ್ರವಾಸಿ ತಾಣಗಳ ಅಭಿವೃದ್ಧಿ ಕಾರ್ಯಗಳ ಅನುಷ್ಠಾನಕ್ಕೆ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ರವರ ಮೂಲಕ ಸ್ಥಳೀಯ ಸಂಸ್ಥೆಗಳಿಂದ ಕ್ರಮ ಕೈಗೊಳ್ಳಲಾಗುವುದು.

**TOR 227 TDV 2022**

**(ಆನಂದ್ ಸಿಂಗ್)**
ಪ್ರವಾಸೋದ್ಯಮ ಹಾಗೂ
ಪರಿಸರ ಮತ್ತು ಜೀವಿ ಶಾಸ್ತ್ರ ಸಚಿವರು